**ಗಮನ ಸೆಳೆಯುವ ಸೂಚನೆ**
**(ನಿಯಮ 72ರ ಮೇರೆಗೆ)**

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಹರೀಶ್ ಕುಮಾರ್ ಇವರ ನಿಯಮ 72ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಮೇಲಿನ ಹೇಳಿಕೆ.

**ಸೂಚನೆ:**

ದಕ್ಷಿಣ ಕನ್ನಡ ಜಿಲ್ಲೆಯ. ಪುತ್ತೂರು ತಾಲ್ಲೂಕಿನ. ಹೃದಯ ಭಾಗದಲ್ಲಿರುವ ಉಪ್ಪಿನಂಗಡಿ ಪೇಟೆಯ ಮಾರುಕಟ್ಟೆ ಇತ್ಯಾದಿಗಳಿಂದ ತೆರೆದ ಚರಂಡಿಯಲ್ಲಿ ಕೊಳಚೆ ನೀರು ಹರಿಯುತ್ತಿಯುತ್ತಿದೆ. ಇದರಿಂದ ಈ ಪ್ರದೇಶದ ಸುತ್ತಮುತ್ತ ದುರ್ನಾತ ಬೀರುವುದಲ್ಲದೆ. ರೋಗರುಜಿನಗಳಿಗೆ ಕಾರಣವಾಗಿದೆ. ಸಾರ್ವಜನಿಕರ ಓಡಾಟಕ್ಕೂ ಸಹ ತುಂಬಾ ತೊಂದರೆಯಾಗಿದ್ದು. ಪ್ರಾಣಹಾನಿಯೂ ಸಂಭವಿಸಿರುತ್ತದೆ. ಆದುದರಿಂದ ಈ ತೆರೆದ ಚರಂಡಿಯ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆಯನ್ನು ಪರಿಣಾಮಕಾರಿಯಾಗಿ ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆನ್ನುವುದರ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಹೇಳಿಕೆ:**

ಪುತ್ತೂರು ತಾಲ್ಲೂಕಿನ ಉಪ್ಪಿನಂಗಡಿ ಪೇಟೆಯು ಜನನಿಬಿಡ ಪ್ರದೇಶವಾಗಿದ್ದು 870ಕ್ಕೂ ಹೆಚ್ಚು ಅಂಗಡಿಗಳು ಮತ್ತು 25ಕ್ಕೂ ಹೆಚ್ಚು ವಸತಿ ಸಮುಚ್ಚಯವನ್ನು ಹೊಂದಿದ್ದು. ಪೇಟೆ ಪ್ರದೇಶದಲ್ಲಿ ಹರಿಯುವ ಸಾರ್ವಜನಿಕ ಚರಂಡಿಗೆ ತ್ಯಾಜ್ಯ ನೀರು ಹರಿಬಿಡುತ್ತಿರುವ ಕಟ್ಟಡದ ಮಾಲೀಕರಿಗೆ ಗ್ರಾಮ ಪಂಚಾಯಿತಿಯಿಂದ ನೋಟೀಸ್ ನೀಡಿ ಚರಂಡಿಗೆ ತ್ಯಾಜ್ಯ ನೀರು ಬಿಡುತ್ತಿರುವ ಪೈಪ್ ಲೈನ್‌ನ್ನು ಮುಚ್ಚಲಾಗಿರುತ್ತದೆ. ಅಲ್ಲದೆ. ಸದರಿ ಕಟ್ಟಡದ ಮಾಲೀಕರು ತಮ್ಮ ಜಾಗದಲ್ಲಿ ದ್ರವತ್ಯಾಜ್ಯ ನಿರ್ವಹಣಾ ಘಟಕ ನಿರ್ಮಿಸುವಂತೆ ಕ್ರಮಕೈಗೊಳ್ಳಲಾಗಿದೆ.

ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಈಗಾಗಲೇ ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಗೆ ಮಾರ್ಗಸೂಚಿಯಲ್ಲಿ ಲಭ್ಯವಿದ್ದ ರೂ.20.00 ಲಕ್ಷಗಳನ್ನು ಈಗಾಗಲೇ ಬಿಡುಗಡೆ ಮಾಡಲಾಗಿದ್ದು ಘನತ್ಯಾಜ್ಯ ನಿರ್ವಹಣಾ ಘಟಕ. ಹಸಿತ್ಯಾಜ್ಯದಿಂದ ಸಾವಯವ ಗೊಬ್ಬರ ತಯಾರಿಸುವ ಘಟಕ ನಿರ್ಮಾಣ ಮಾಡಲಾಗಿದ್ದು. ಸದರಿ ಗ್ರಾಮದ ಜನವಸತಿ ಹಾಗೂ ಅಂಗಡಿಗಳಿಂದ ತ್ಯಾಜ್ಯವನ್ನು ಶೇಖರಿಸಿ ವೈಜ್ಞಾನಿಕ ಮಾದರಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ. ಶೌಚಗುಂಡಿಗಳ ಕಪ್ಪುನೀರು ನಿರ್ವಹಣೆಗೆ ಮಲತ್ಯಾಜ್ಯ ನಿರ್ವಹಣಾ ಘಟಕವನ್ನು ನಿರ್ಮಾಣ ಮಾಡಲು ಈಗಾಗಲೇ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿದ್ದು ಶೀಘ್ರದಲ್ಲಿ ಕಾಮಗಾರಿ ಪ್ರಾರಂಭಿಸಲಾಗುತ್ತದೆ.

ಅಲ್ಲದೆ. ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ರೂ.5.00 ಲಕ್ಷಗಳ ಅನುದಾನ ಹಾಗೂ 15ನೇ ಹಣಕಾಸು ಆಯೋಗದ ಅನುದಾನದಡಿ ರೂ.21.48 ಲಕ್ಷ ಅನುದಾನ ಲಭ್ಯವಿದ್ದು ಅಗತ್ಯವಿರುವ ಸ್ಥಳಗಳಲ್ಲಿ ಚರಂಡಿ ನಿರ್ಮಾಣ ಮಾಡಲು ಕ್ರಿಯಾಯೋಜನೆ ರೂಪಿಸಲಾಗಿದೆ. ಅಲ್ಲದೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಪ್ರತಿ ಮನೆಗೆ ಬೂದು ನೀರು ನಿರ್ವಹಣೆಗೆ ಇಂಗು ಗುಂಡಿ ನಿರ್ಮಾಣ ಹಾಗೂ ಸಮುದಾಯ ಹಂತದಲ್ಲಿ ಸಮುದಾಯ ಇಂಗು ಗುಂಡಿ ನಿರ್ಮಾಣ ಮಾಡಲು ಕ್ರಿಯಾ ಯೋಜನೆ ತಯಾರಿಸಿದ್ದು. ಶೀಘ್ರದಲ್ಲಿ ಅನುಷ್ಠಾನ ಮಾಡುವ ಮೂಲಕ ತ್ಯಾಜ್ಯ ನೀರಿನ ವೈಜ್ಞಾನಿಕ ನಿರ್ವಹಣೆ ಮಾಡಲು ಕ್ರಮವಹಿಸಲಾಗುತ್ತಿದೆ.

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

Scanned with CamScanner